ಅನಧಿಕೃತವಾಗಿ ಮದ್ಯ ಮಾರಾಟದ ಬಗ್ಗೆ

102 (227): ಶ್ರೀ ನಾಡಗೌಡ ವಿಂಕಟರಾವ್ (ಸಿಂಧನೂರು): ಮತ್ತು ಶ್ರೀ ಯು. ಟಿ. ಖಾದರ್ : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಸ್ವೇಚ್ಛಾಚಾರದಿಂದ ಅನಧಿಕೃತವಾಗಿ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಅನಧಿಕೃತ ಮದ್ಯ ಮಾರಾಟವನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ರೀತಿ ಅನಧಿಕೃತವಾಗಿ ಮದ್ಯಮಾರಾಟ ಮಾಡುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ನಿಜವಲ್ಲವೇ;

ಈ) ಈ ಅನಧಿಕೃತ ಮದ್ಯಮಾರಾಟದಿಂದ ಕಳ್ಳಭಟ್ಟಿಯನ್ನು ತಯಾರಿಸಿ ಅಧಿಕೃತ ಮದ್ಯದ ಜೊತೆಯಲ್ಲಿ ಸೇರಿಸಿ ಮಾರಾಟ ಮಾಡುವುದರಿಂದ ಸಾರ್ವಜನಿಕ ಜೀವಹಾನಿಗೆ ದಾರಿ ಮಾಡಿದಂತಾಗುವುದಿಲ್ಲವೇ;

ಉ) ಈ ಅನಧಿಕೃತ ಮದ್ಯ ಮಾರಾಟಗಾರರ ಮೇಲೆ ಕಾನೂನು ರೀತ್ಯ ಕ್ರಮ ಕೈಗೊಳ್ಳಲು ಸರ್ಕಾರಕ್ಕಿರುವ ತೊಂದರೆಗಳೇನು;

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು):

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಅನಧಿಕೃತವಾಗಿ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೆ ಸ್ವೇಚ್ಛಾಚಾರದಿಂದ ಅಲ್ಲ.

ಆ) ಅನಧಿಕೃತ ಮದ್ಯ ಮಾರಾಟ ಮಾಡುತ್ತಿದ್ದವರ ವಿರುದ್ಧ ಅಬಕಾರಿ ಕಾಯ್ದೆ, 1965ರಡಿ ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ. 2009–10 ನೇ ಸಾಲಿನಲ್ಲಿ 2094 ಮೊಕದ್ದಮೆಗಳನ್ನು ದಾಖಲಿಸಿ, 1658 ಆರೋಪಿಗಳನ್ನು ಬಂಧಿಸಲಾಗಿರುತ್ತದೆ. 2010–11ನೇ ಸಾಲಿನ (ಡಿಸೆಂಬರ್ ವರೆಗೆ) ಅಬಕಾರಿ ಕಾಯ್ದೆಯನ್ನು ಉಲ್ಲಂಘಿಸಿದವರ ಮೇಲೆ 1568 ಮೊಕದ್ದಮೆಗಳನ್ನು ದಾಖಲಿಸಿ 1368 ಆರೋಪಿಗಳನ್ನು ಬಂಧಿಸಲಾಗಿರುತ್ತದೆ.

ಗ್ರಾಮ ಮಟ್ಟದಲ್ಲಿನ ಸಾರ್ವಜನಿಕರು ಹಾಗೂ ಚುನಾಯಿತ ಜನ ಪ್ರತಿನಿಧಿಗಳಲ್ಲಿ ಅನಧಿಕೃತ ಮದ್ಯದ ಸೇವನೆಯ ದುಷ್ಪರಿಣಾಮಗಳ ಬಗ್ಗೆ ತಿಳುವಳಿಕೆ ಮೂಡಿಸುವುದು ಮತ್ತು ಅವರ ಸಹಕಾರ ಪಡೆದು ಅಬಕಾರಿ ಕಾಯ್ದೆಯನ್ನು ಜಾರಿಗೆ ತಂದು ಅಕ್ರಮ ತಯಾರಿಕೆ ಸಾಗಾಣಿಕೆ/ಬಳಕೆಯನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಹೌದು.

ಈ) ಅನಧಿಕೃತ ಮದ್ಯಮಾರಾಟದಿಂದ ಕಳ್ಳಭಟ್ಟಿಯನ್ನು ತಯಾರಿಸಿ ಅಧಿಕೃತ ಮದ್ಯದ ಜೊತೆಯಲ್ಲಿ ಸೇರಿಸಿ ಮಾರಾಟ ಮಾಡುವುದರಿಂದ ಸಾರ್ವಜನಿಕರ ಜೀವಹಾನಿಯಾಗುವ ಸಂಭವವಿದೆ. ಅಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

ಉ) ಅನಧಿಕೃತ ಮದ್ಯ ಮಾರಾಟಗಾರರ ಮೇಲೆ ಕಾನೂನು ರೀತ್ಯ ಕ್ರಮ ಕೈಗೊಂಡು ಮೊಕದ್ದಮೆಗಳನ್ನು ದಾಖಲಿಸುವುದರ ಮೂಲಕ ಅಕ್ರಮಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ. ಹಾಗೂ ಸಿಬ್ಬಂದಿಗಳ ಕೊರತೆಯಿದ್ದು ಈ ಬಗ್ಗೆ ಸಿಬ್ಬಂದಿಯ ನೇಮಕಾತಿಗಾಗಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ರಾಯಚೂರು ಜಿಲ್ಲೆಯ ಗ್ರಂಥಾಲಯ ಸ್ಥಾಪನೆ ಬಗ್ಗೆ

103 (229): ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಯಚೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು);

ಆ) ಸಿಂಧನೂರು ತಾಲ್ಲೂಕಿನಲ್ಲಿ ಗ್ರಂಥಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಹೊಸ ಗ್ರಂಥಾಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;